ಅ) ರಾಜ್ಯದ ಹೆದ್ದಾರಿಗಳನ್ನು ಸುಧಾರಿಸಲು ರಸ್ತೆ ನಿಧಿ ಸ್ಥಾಪಿಸುವ ಉದ್ದೇಶ ಸರ್ಕಾರದ ಪರಿಶೀಲನೆಯಲ್ಲಿದೆ.

ಆ) ರಾಜ್ಯ ಹೆದ್ದಾರಿ, ಜಿಲ್ಲಾ ಮುಖ್ಯ ರಸ್ತೆಗಳು ಹಾಗೂ ಅವುಗಳ ಮೇಲೆ ಬರುವ ಸೇತುವೆಗಳ ನಿರ್ಮಾಣ / ಪುನರ್ ನಿರ್ಮಾಣ, ರಸ್ತೆ ಮತ್ತು ಸೇತುವೆಗಳ ನಿರ್ವಹಣೆ / ಅಭಿವೃದ್ಧಿ ಮುಖ್ಯ ಉದ್ದೇಶಗಳು.

ಇ) ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದೆ. ಲೋಕೋಪಯೋಗಿ ಇಲಾಖೆ ರಸ್ತೆಗಳ ಸಮಗ್ರ ಅಭಿವೃದ್ಧಿಗಾಗಿ ವರದಿಯ ಪ್ರಮುಖ ಅಂಶಗಳು ಕೆಳಕಂಡಂತೆ ಇವೆ;

ಲೋಕೋಪಯೋಗಿ ಇಲಾಖೆ ರಸ್ತೆಗಳ ವಿವರಗಳನ್ನು ಕಂಪ್ಯೂಟರ್‌ನಲ್ಲಿ ಅಳವಡಿಸುವುದು

ಲೋಕೋಪಯೋಗಿ ಇಲಾಖೆಯನ್ನು ನಿಗಮದ ಮಾದರಿಯಲ್ಲಿ ಕರ್ನಾಟಕ ರೋಡ್ ಬೋರ್ಡ್ ಆಗಿ ಪುನರ್ ರಚಿಸುವುದು

ಲೋಕೋಪಯೋಗಿ ಇಲಾಖೆಯ ರಸ್ತೆಗಳ ಅಭಿವೃದ್ಧಿ ಮತ್ತು ನಿರ್ವಹಣೆಗೆ ಕರ್ನಾಟಕ ರೋಡ್ ಫಂಡ್ ಸ್ಥಾಪಿಸಿ ಕರ್ನಾಟಕ ರಸ್ತೆ ನಿಧಿಯನ್ನು ವಿಶೇಷ ಸುಂಕದ ಮೂಲಕ ಕ್ರೋಢೀಕರಿಸುವುದು.

ಮುಖ್ಯವಾದ ಊರಿನ ರಸ್ತೆಗಳಿಗೆ ಬೈಪಾಸ್ ನಿರ್ಮಿಸುವುದು

ಇಲಾಖೆಯ ಇಂಜಿನಿಯರ್‌ಗಳಿಗೆ ತರಬೇತಿ ನೀಡಲು, ತಾಂತ್ರಿಕ ತೊಂದರೆಗಳಿಗೆ ಸಲಹೆ ನೀಡಲು, ಕರ್ನಾಟಕ ಹೈವೇ ರೀಸರ್ಚ್ ಸೆಂಟರ್ ಸ್ಥಾಪಿಸುವುದು.

ಪೂರ್ವಾನುಭವ ಇರುವ ಗುತ್ತಿಗೆದಾರರಿಗೆ ಮಾತ್ರ ಕಾಮಗಾರಿಗಳನ್ನು ವಹಿಸುವುದು.

ಈ) ವರದಿಯಲ್ಲಿರುವ ಅಂಶಗಳನ್ನು ಪರಿಶೀಲಿಸಲಾಗುತ್ತಿದೆ.

ದೊಡ್ಡಬಳ್ಳಾಪುರ ಕ್ಷೇತ್ರಕ್ಕೆ ನಬಾರ್ಡ್ ಯೋಜನೆ

4959 - ಶ್ರೀ ಕೃಷ್ಣಪ್ಪ ವಿ. (ದೊಡ್ಡಬಳ್ಳಾಪುರ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದೊಡ್ಡಬಳ್ಳಾಪುರ ಕ್ಷೇತ್ರದಲ್ಲಿ ನಬಾರ್ಡ್ ವತಿಯಿಂದ ತೆಗೆದುಕೊಂಡು ಕನ್‌ಸ್ಟ್ರಕ್ಷನ್ ಕಾರ್ಪೋರೇಷನ್‌ಗೆ ಸೇರಿದ್ದು ನಂತರ ಗುತ್ತಿಗೆದಾರರನ್ನು ಬದಲಾಯಿಸಿದ್ದು ಇದುವರೆವಿಗೂ ಪ್ರಗತಿ ಕಂಡು ಬಂದಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ಹಾಗೂ ಈ ಕೆಲಸವನ್ನು ಎಂದು ಪೂರ್ಣಗೊಳಿಸಲಾಗುವುದು?

ಶ್ರೀ ಧರಮ್ ಸಿಂಗ್ (ಲೋಕೋಪಯೋಗಿ ಸಚಿವರು) :

ಅ) ಬಂದಿದೆ.

ಆ) ಕೆ.ಎಸ್. ರಸ್ತೆಯಿಂದ ಮೆಣಸಿ ಮಾರ್ಗವಾಗಿ ಶಾಕಲದೇವನಪುರ ಸೇರುವ ರಸ್ತೆ ಕಾಮಗಾರಿಯು ರೂ. 50.00 ಲಕ್ಷಗಳಿಗೆ ಅನುಮೋದನೆಯಾಗಿದ್ದು, ಇದನ್ನು ಕರ್ನಾಟಕ ಕನ್‌ಸ್ಟ್ರಕ್ಷನ್ ಕಾರ್ಪೊರೇಷನ್‌ಗೆ ವಹಿಸಿದ್ದು ರೂ. 30 ಲಕ್ಷ ರೂ.ಗಳಷ್ಟು ಪ್ರಗತಿ ನೀಡಿದ್ದು, ಪೂರ್ಣಗೊಳಿಸಲು ವಿಫಲರಾದ ಕಾರಣ ಉಳಿಕೆ ಕಾಮಗಾರಿಗೆ, ಬೇರೆ ಗುತ್ತಿಗೆದಾರರನ್ನು ನೇಮಿಸಲು ಕ್ರಮಕೈಗೊಳ್ಳಲಾಗುತ್ತಿದೆ. ಈ ಕಾಮಗಾರಿಯನ್ನು ಮಾರ್ಚ್ 2001 ರೊಳಗೆ ಪೂರ್ಣಗೊಳಿಸಲಾಗುವುದು.

ಕಬ್ಬಿನ ಬೆಲೆಯನ್ನು ನಿಗದಿ ಮಾಡುವುದು

4960 - ಶ್ರೀ ಕರಿಯಣ್ಣ (ಹೊಳೆಹೊನ್ನೂರು) : ಮಾನ್ಯ ಪಶು ಸಂಗೋಪನೆ ಹಾಗೂ ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಸಕ್ಕರೆ ಕಾರ್ಖಾನೆಗಳಿಗೆ ರೈತರ ಕಬ್ಬಿಗೆ ಬೆಲೆ ನಿಗದಿ ಮಾಡುವ ಅಧಿಕಾರ ರಾಜ್ಯ ಸರ್ಕಾರಕ್ಕೆ ಇಲ್ಲವೆಂದು ನ್ಯಾಯಾಲಯದಲ್ಲಿ ತೀರ್ಮಾನವಾಗಿರುತ್ತದೆಂದು ತಿಳಿದು ಬಂದಿರುತ್ತದೆ ಇದು ನಿಜವೇ?

ಆ) ನ್ಯಾಯಾಲಯದಿಂದ ಈ ರೀತಿ ಆದೇಶ ಇದ್ದರೆ ರಾಜ್ಯದ ಕಬ್ಬು ಬೆಳೆಯುವ ರೈತರ ಹಿತ ಕಾಪಾಡಲು ಸರ್ಕಾರ ಯಾವ ರೀತಿಯ ಕ್ರಮ ಕೈಗೊಳ್ಳುವುದು?

ಇ) ರಾಷ್ಟ್ರವಾಪ್ತಿಯಲ್ಲಿ ಕೇಂದ್ರ ಸರ್ಕಾರ ಕಬ್ಬಿನ ಬೆಲೆಯನ್ನು ನಿಗದಿ ಮಾಡಬೇಕಾದಾಗ ರಾಜ್ಯ ಸರ್ಕಾರ ಅಭಿಪ್ರಾಯ ಕೇಳುವುದೇ ತಿಳಿಸಿ?

ಶ್ರೀ ಎ. ಕೃಷ್ಣಪ್ಪ (ಪಶುಸಂಗೋಪನೆ ಹಾಗೂ ಸಕ್ಕರೆ ಸಚಿವರು) :

ಅ) ಹೌದು.

ಆ) ಆಯಾ ಕಾರ್ಖಾನೆಗಳ ಆಡಳಿತ ಮಂಡಳಿಯವರು ಹಾಗೂ ಆಯಾ ಕಾರ್ಖಾನೆಗಳ ಕಬ್ಬು ಬೆಳೆಗಾರರ ಸಂಘಗಳ ಪ್ರತಿನಿಧಿಗಳು ಸೇರಿ ಒಮ್ಮತದಿಂದ ಎರಡು ಕಡೆಯವರಿಗೆ ಅನುಕೂಲವಾಗುವಂತೆ ಆಯಾ ವರ್ಷಗಳಿಗೆ ದರಗಳನ್ನು ನಿಗದಿಪಡಿಸುವ ವಾಡಿಕೆ ಚಾಲ್ತಿಯಲ್ಲಿದ್ದು, ಅದನ್ನು ಮುಂದುವರೆಸಿಕೊಂಡು ಹೋಗಲಾಗುವುದು. ಆದರೆ ಅವಶ್ಯವಿದ್ದಲ್ಲಿ ಮಾತ್ರ ಸರ್ಕಾರದಿಂದ ಸಲಹೆಗಳನ್ನು ನೀಡಲು ಕ್ರಮವಿಡಲಾಗುವುದು.

ಇ) ಹೌದು. ಕೇಂದ್ರ ಸರ್ಕಾರದವರು ರಾಜ್ಯ ಸರ್ಕಾರದ ಅಭಿಪ್ರಾಯ ಕೇಳುತ್ತಾರೆ.

ಶಿವಮೊಗ್ಗದಲ್ಲಿ ಸಕ್ಕರೆ ಕಾರ್ಖಾನೆ ಮಾಡುವುದು

4961 - ಶ್ರೀ ಕರಿಯಣ್ಣ (ಹೊಳೆಹೊನ್ನೂರು) : ಮಾನ್ಯ ಪಶು ಸಂಗೋಪನೆ ಹಾಗೂ ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?